**ಪಿ.ಡಬ್ಲು : 1**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.**

**ದಿನಾಂಕಃ 08-12-2025**

ನಾನು ಟಿ ಎಮ್ ಸಿ ಭಟ್ಕಳ ಪಿರ್ಯಾದಿಯ ಕಚೇರಿಯಲ್ಲಿ ಮುಖ್ಯಾಧಿಕಾರಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರ ಸಲ್ಲಿಸಿದ್ದು ಪ್ರಮಾಣ ಪತ್ರದಲ್ಲಿನ ವಿಷಯ ಸತ್ಯವಾಗಿದ್ದು ಅದನ್ನು ನಾನೇ ಹೇಳಿ ಬರೆಸಿದ್ದು ಅದರಲ್ಲಿನ ಸಹಿ ನನ್ನದೇ ಆಗಿರುತ್ತದೆ.

**ಮುಂದುವರಿದ ಮುಖ್ಯ ವಿಚಾರಣೆಃ ಪಿರ್ಯಾದಿ ಪರ ಶ್ರೀ ಯು ಎನ್ .ಎನ್./ಎಸ್ ಬಿ ಬಿ ವಕೀಲರಿಂದ**

ನಾನು ಕಳೆದ ಒಂದು ವರ್ಷದಿಂದ ಫಿರ್ಯಾದಿ ಕಚೇರಿಯಲ್ಲಿ ಮುಖ್ಯಾಧಿಕಾರಿಯಾಗಿ ಕೆಲಸ ಮಾಡುತ್ತಿದ್ದೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ನೀಡಿದ ಒಂದು ಮೂಲ ಚೆಕ್, ಬ್ಯಾಂಕಿನವರು ನೀಡಿದ ಒಂದು ಮೆಮೋವನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ಮತ್ತು 2 ಎಂದು ಗುರುತಿಸಲಾಯಿತು. ವಕೀಲರ ಮುಖಾಂತರ ನೀಡಿದ ನೋಟಿಸಿನ ಪ್ರತಿ ಮತ್ತು ಅಂಚೆ ರಶೀದಿ, ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ರಿಂದ 5 ಎಂದು ಗುರುತಿಸಲಾಯಿತು. ಅದೇ ರೀತಿ ನಮ್ಮ ಕಚೇರಿಯಲ್ಲಿ ಬಹಿರಂಗ ಹರಾಜು ಮಾಡಿದ ಪ್ರಕಟಣೆಯ ಪ್ರತಿ, ಹರಾಜು ವಹಿ ಪ್ರತಿ, ಮತ್ತು ಆರೋಪಿ ನಮ್ಮ ನೋಟಿಸಿಗೆ ನೀಡಿದ ಉತ್ತರದ ಪ್ರತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-6 ರಿಂದ ನಿಪಿ-8 ಎಂದು ಗುರುತಿಸಲಾಯಿತು.

ಆದ್ದರಿಂದ ಆರೋಪಿ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕಾಗಿ ವಿನಂತಿ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ.ಹೆಚ್.ಎನ್ ವಕೀಲರಿಂದ**

(ಈ ಹಂತದಲ್ಲಿ ಶ್ರೀ ಎಮ್ ಹೆಚ್ ಎನ್ ವಕೀಲರ ಪರವಾಗಿ, ಶ್ರೀ ಬಿ ಎನ್ ಎನ್ ವಕೀಲರು ಪಾಟೀ ಸವಾಲು ಮಾಡಲು ಸಮಯ ಕೋರಿದ್ದು, ವಿನಂತಿ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.)

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

**ಸಹಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು, ಮತ್ತು**

**ಜೆ.ಎಂ.ಎಫ್.ಸಿ., ನ್ಯಾಯಾಲಯ ಭಟ್ಕಳ**